ರಾಜ್ಯದಲ್ಲಿರುವ ಅಂಗನವಾಡಿ ಕುರಿತು.

1625 - ಡಾ॥ಎಂ.ಪಿ. ಕರ್ಕಿ (ಕುಮಟಾ) : ಮಾನ್ಯ ಮಹಿಳಾ ಮತ್ತು ಮಕ್ಕಳ ರಾಜ್ಯ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) 1996-97ನೇ ಸಾಲಿನಲ್ಲಿ ಹೆಚ್ಚುವರಿ ಮಂಜೂರಾತಿಯಾದ ಅಂಗನವಾಡಿಗಳೆಷ್ಟು?

ಆ) ಅಂಗನವಾಡಿಗಳನ್ನು ತಾಲ್ಲೂಕು ವಾರು ಹಂಚಿಕೆ ಮಾಡುವ ಕೆಲಸ ಎಂದು ಮುಗಿಯಿತು?

ಇ) ಸದರಿ ಅಂಗನವಾಡಿಗಳ ಪ್ರಾರಂಭ ಎಂದು ಮಾಡಲಾಗುವುದು?

ಶ್ರೀಮತಿ ವಿಮಲಾಬಾಯಿ ಜಗದೇವರಾವ್ ದೇಶ್‌ಮುಖ್ (ಮಹಿಳಾ ಮತ್ತು ಮಕ್ಕಳ ಕಲ್ಯಾಣ ರಾಜ್ಯ ಸಚಿವರು)

ಅ) ರಾಜ್ಯದಲ್ಲಿ 1996-97ನೇ ಸಾಲಿನಲ್ಲಿ ಹೆಚ್ಚುವರಿ ಅಂಗನವಾಡಿ ಕೇಂದ್ರಗಳು ಮಂಜೂರಾಗಿರುವುದಿಲ್ಲ.

ಆ) ಉದ್ಭವಿಸುವುದಿಲ್ಲ.

ಇ) ಉದ್ಭವಿಸುವುದಿಲ್ಲ.

ತುರುವೇಕೆರೆ ತಾಲ್ಲೂಕಿಗೆ ಕೊಳಚೆ ನಿರ್ಮೂಲನ ಮಂಡಳಿಯಿಂದ ಮಂಜೂರಾಗಿರುವ ಯೋಜನೆ.

1627 - ಶ್ರೀ ಹೆಚ್.ಬಿ. ನಂಜೇಗೌಡ (ತುರುವೇಕೆರೆ) : ಮಾನ್ಯ ವಸತಿ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ತುರುವೇಕೆರೆ ತಾಲ್ಲೂಕಿಗೆ ಕೊಳಚೆ ನಿರ್ಮೂಲನ ಮಂಡಳಿಯಿಂದ ಮಂಜೂರಾಗಿರುವ ಯೋಜನೆಗಳು ಎಷ್ಟು? (ವಿವರ ನೀಡುವುದು).

ಶ್ರೀ ಹೆಚ್.ಡಿ. ರೇವಣ್ಣ (ವಸತಿ ಸಚಿವರು) :

ಅ) 1997-98ನೇ ಸಾಲಿನಲ್ಲಿ ತುರುವೇಕೆರೆಯ ಏ.ಕೆ.ಕಾಲೋನಿ ಕೊಳಚೆ ಪ್ರದೇಶಕ್ಕೆ ರಾಷ್ಟ್ರೀಯ ಕೊಳಚೆ ಪ್ರದೇಶಗಳ ಅಭಿವೃದ್ಧಿ ಯೋಜನೆಯ ಅಡಿಯಲ್ಲಿ 6.75 ಲಕ್ಷ ರೂ.ಗಳ ಅಂದಾಜಿನಲ್ಲಿ ಮಳೆ ನೀರಿನ ಚರಂಡಿ, ಸಮುದಾಯ ಭವನ ಹಾಗೂ ಕಿರು ನೀರು ಸರಬರಾಜು ಯೋಜನೆಗಳನ್ನು ತೆಗೆದುಕೊಳ್ಳಲು ಮಂಜೂರಾತಿ ನೀಡಲಾಗಿದೆ.

ಬೆಂಗಳೂರು ನಗರದಲ್ಲಿ ಬಾಡಿಗೆದಾರರಿಗೆ ಕಿರುಕುಳ

1630 - ಶ್ರೀ ರಾಮಲಿಂಗ ರೆಡ್ಡಿ (ಜಯನಗರ) : ಮಾನ್ಯ ಕಂದಾಯ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ಬೆಂಗಳೂರು ನಗರದಲ್ಲಿ ಬಾಡಿಗೆ ಮನೆಗಳಲ್ಲಿ ವಾಸ ಮಾಡುತ್ತಿರುವವರ ಸಂಖ್ಯೆ ಎಷ್ಟು ?

ಆ) ಬೆಂಗಳೂರು ನಗರದಲ್ಲಿ ಬಾಡಿಗೆದಾರರಿಗೆ ಮಾಲೀಕರು ಕಿರುಕುಳ, ಮನಸ್ಸಿಗೆ ಬಂದ ರೀತಿ ಬಾಡಿಗೆ (ಏರಿಕೆ) ಹೆಚ್ಚಿಗೆ ಮಾಡುತ್ತಿರುವುದು ಸಹಾಗೂ ದಳ್ಳಾಳಿಗಳಿಂದ ಸುಲಿಗೆ ಜಾಸ್ತಿಯಾಗುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ?

ಇ) ಹಾಗಿದ್ದಲ್ಲಿ, ಬಾಡಿಗೆದಾರರಿಗೆ ರಕ್ಷಣೆ ಒದಗಿಸಲು ಸರ್ಕಾರವು ಕೈಗೊಳ್ಳಲಿರುವ ಕ್ರಮಗಳೇನು ?

ಶ್ರೀ ರಮೇಶ್ ಸಿ. ಜಿಗಜಿಣಗಿ (ಕಂದಾಯ ಸಚಿವರು) :

ಅ) ಸರ್ಕಾರದ ಅಧಿಸೂಚನೆ ಸಂಖ್ಯೆ : ಆರ್ ಡಿ 77 ಬಿಹೆಚ್ಆರ್ 95 ದಿನಾಂಕ 24-4-1995 ರಂತೆ ಬಾಡಿಗೆ ನಿಯಂತ್ರಣ ಕಾಯ್ದೆಯ ಕಲಂ 4,5 ಮತ್ತು 10-ಎ ಗಳು ಬೆಂಗಳೂರು ನಗರಕ್ಕೆ ದಿನಾಂಕ 24-4-1995 ರಿಂದ ಅನ್ವಯಿಸುವುದಿಲ್ಲ ವಾದ್ದರಿಂದ, ಬೆಂಗಳೂರು ನಗರದಲ್ಲಿ ಬಾಡಿಗೆ ಮನೆಗಳಲ್ಲಿ ವಾಸ ಮಾಡುತ್ತಿರುವವರ ಸಂಖ್ಯೆಯನ್ನು ತಿಳಿಸಲು ಸಾಧ್ಯವಿರುವುದಿಲ್ಲ.

ಆ) ಹೌದು

ಇ) ಕೇಂದ್ರ ಸರ್ಕಾರವು ರೂಪಿಸಿರುವ ಮಾದರಿ ಬಾಡಿಗೆ ನಿಯಂತ್ರಣ ಕಾಯ್ದೆಯನ್ನು ರಾಜ್ಯದಲ್ಲಿಯೂ ಜಾರಿಗೆ ತರುವ ವಿಷಯವು ಸರ್ಕಾರದ ಪರಿಶೀಲನೆಯಲ್ಲಿದೆ.

ದಸ್ತಾವೇಜುಗಳ ನಕಲಾತಿ.

1632 - ಶ್ರೀ ಎ. ರಾಮದಾಸ್ (ಕೃಷ್ಣರಾಜ) : ಮಾನ್ಯ ಕಂದಾಯ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ ?

ಅ) ರಾಜ್ಯದಲ್ಲಿ ನೋಂದಣಿ ಮತ್ತು ಮುದ್ರಾಂಕಿತ ಇಲಾಖೆಯಲ್ಲಿ ಒಟ್ಟು ಎಷ್ಟು ದಸ್ತಾವೇಜುಗಳು ನಕಲಾಗಿದೆ ಬಾಕಿ ಉಳಿದಿವೆ (ಜಿಲ್ಲಾವಾರು ವಿವರ ನೀಡುವುದು) ?

ಆ) ಈ ಬಾಕಿ ಉಳಿದಿರುವ ದಾಸ್ತಾವೇಜುಗಳ ನಕಲಾತಿಯನ್ನು ಪೂರ್ಣಗೊಳಿಸಲು ಸರ್ಕಾರವು ಕೈಗೊಂಡಿರುವ ಕ್ರಮಗಳೇನು ?

ಶ್ರೀ ರಮೇಶ್ ಸಿ. ಜಗಜಿಣಗಿ (ಕಂದಾಯ ಸಚಿವರು) :

ಅ) ವಿವರಗಳನ್ನು ಅನುಬಂಧದಲ್ಲಿ ನೀಡಲಾಗಿದೆ.

ಆ) ದಸ್ತಾವೇಜುಗಳ ಶೀಘ್ರ ನಕಲಾತಿಗಾಗಿ ಮೈಕ್ರೋಫಿಲಂ ಕಾರ್ಯ ವಿಧಾನವನ್ನು ಜಾರಿಗೆ ತರಲು ಉದ್ದೇಶಿಸಲಾಗಿದ್ದು, ಈಗಾಗಲೇ ಬೆಂಗಳೂರು ನಗರ ಜಿಲ್ಲೆಯ ದಕ್ಷಿಣ ತಾಲ್ಲೂಕು ಉಪ-ನೋಂದಣಿ ಕಛೇರಿಯಲ್ಲಿ ಮೈಕ್ರೋ-ಫಿಲಂ ಯಂತ್ರವನ್ನು ಅಳವಡಿಸಲಾಗಿದೆ. ಈ ಪದ್ಧತಿಯನ್ನಾಗಲೀ ಅಥವಾ ಸ್ಕ್ಯಾನಿಂಗ್ ಪದ್ಧತಿಯನ್ನಾಗಲೀ ರಾಜ್ಯದ ಪ್ರಮುಖ ಸ್ಥಳಗಳಲ್ಲಿ ಜಾರಿಗೆ ತಂದು ಬಾಕಿ ಉಳಿದಿರುವ ದಾಸ್ತಾವೇಜುಗಳ ನಕಲಾತಿಯನ್ನು ಶೀಘ್ರವಾಗಿ ಪೂರ್ಣಗೊಳಿಸುವ ಬಗ್ಗೆ ಕ್ರಮ ಕೈಗೊಳ್ಳಲಾಗುವುದು.